ದಿನಾಂಕ 18 01 2007 ರಿಂದ ತಾಲ್ಲೂಕು ರಕ್ಷಾ ಸಮಿತಿಗಳಿಗೆ, ಸಂಬಂಧಿಸಿದ ವಿಧಾನ ಸಭಾ ಸದಸ್ಯರು ಅಧ್ಯಕ್ಷರು ಹಾಗೂ 6 ಜನ ಅಧಿಕಾರೇತರ ಸದಸ್ಯರಿಗೆ ನಾಮ ನಿರ್ದೇಶನ ಮಾಡಿ ಆದೇಶ ಹೊರಡಿಸಲಾಗಿದೆ

ಇ) ಆಸ್ಪತ್ರೆಯಲ್ಲಿ ಸಂಗ್ರಹವಾದ ಬಳಕೆದಾರರ ಶುಲ್ಕ (Users Charge) ದಿಂದ ಆಸ್ಪತ್ರೆಗಳಿಗೆ ಉಪಕರಣ/ ಔಷಧಿ ಇತ್ಯಾದಿಗಳನ್ನು ಕೊಳ್ಳಲು ಆರೋಗ್ಯ ರಕ್ಷಾ ಸಮಿತಿಯನ್ನು ನೇಮಕ ಮಾಡಲಾಗಿದೆ

1055 (1184) ಶ್ರೀ ಅಶೋಕ್ ಗುರಪ್ಪ ಶಾಬಾದಿ (ಸಿಂಧಗಿ) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ,

ಅ) ಸಿಂಧಗಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿರುವ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸಲು ಸರ್ಕಾರ ಕೈಗೊಂಡ ಕ್ರಮವೇನು, (ವಿವರ ಒದಗಿಸುವುದು)

ಆ) ಹಾಲಿ ಸಿಂಧಗಿ ವಿಧಾನ ಸಭಾ ಕ್ಷೇತ್ರದಲ್ಲಿರುವ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು,

ಇ) ಸಿಂಧಗಿ ವಿಧಾನ ಸಭಾ ಕ್ಷೇತ್ರದಲ್ಲಿ ಹೊಸದಾಗಿ ಆರೋಗ್ಯ ಕೇಂದ್ರಗಳನ್ನು ಸ್ಥಾಪನೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಆರ್ ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಸಿಂಧಗಿ ವಿಧಾನ ಸಭಾ ವ್ಯಾಪ್ತಿಯಲ್ಲಿ ಬರುವ 7 ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಕಲಕೇರಿ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ ಈ ಕೇಂದ್ರದ ಕಟ್ಟಡ ಕಾಮಗಾರಿಯನ್ನು 08 02 2001ರಲ್ಲಿ 55 ಲಕ್ಷ ರೂ ಗಳಿಗೆ ಆಡಳಿತಾತ್ಮಕ ಮಂಜೂರಾತಿ ನೀಡಲಾಗಿದೆ 28 05 2002 ರಂದು ಕಾಮಗಾರಿಯನ್ನು ಪ್ರಾರಂಭಿಸಲಾಗಿದೆ 2006–07 ರಲ್ಲಿ 5 ಲಕ್ಷ ರೂ ಗಳನ್ನು ಬಿಡುಗಡೆ ಮಾಡಲಾಗಿದೆ ಪುನಃ ಈಗ 20 ಲಕ್ಷ ರೂ ಗಳನ್ನು ಬಿಡುಗಡೆ ಮಾಡಲಾಗುತ್ತಿದೆ 07–08ನೇ ಸಾಲಿನಲ್ಲಿ ಈ ಕಟ್ಟಡವನ್ನು ಪೂರ್ಣಗೊಳಿಸಲಾಗುವುದು

ಆ) ಸಿಂಧಗಿ ವಿಧಾನ ಸಭಾ ಕ್ಷೇತ್ರದಲ್ಲಿ 7 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ (ಕಲಕೇರಿ, ಹಸ್ಕಿ, ದೇವರ ಹಿಪ್ಪರಗಿ, ಕೊರವಾರ, ಚಾಂದ್‌ಕೋಟ್, ಎಂಕಂಚಿ, ಬಳಗನೂರು)

ಇ) ಸಿಂಧಗಿ ವಿಧಾನ ಸಭಾ ಕ್ಷೇತ್ರದ ಜನಸಂಖ್ಯೆ ಸುಮಾರು 2 ಲಕ್ಷ ಇದ್ದು ಏಳು ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿರುವುದರಿಂದ ಮಾರ್ಗಸೂಚಿ ಪ್ರಕಾರ ಹೆಚ್ಚಿನ ಕೇಂದ್ರಗಳ ಸ್ಥಾಪನೆಗೆ ಅವಕಾಶವಿರುವುದಿಲ್ಲ

1056 (1185) ಶ್ರೀ ಅಶೋಕ್ ಗುರಪ್ಪ ಶಾಬಾದಿ (ಸಿಂಧಗಿ) ಮಾನ್ಯ ಸಮಾಜ ಕಲ್ಯಾಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ,

ಅ) ಸಿಂಧಗಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿರುವ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು (ವಿವರ ಒದಗಿಸುವುದು),

ಆ) ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ವಸತಿನಿಲಯಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಹೌದಾದಲ್ಲಿ ವಸತಿನಿಲಯಗಳ ಮಂಜೂರಾತಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು,

ಇ) ಹಾಗಿದ್ದಲ್ಲಿ ಯಾವಾಗ ಮಂಜೂರು ಮಾಡಲು ಕ್ರಮ ಕೈಗೊಳ್ಳಲಾಗುವುದು?

ಶ್ರೀ ಬಾಲಚಂದ್ರ ಲ ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು)

ಅ)

ಕ್ರ ಸಂ	ಜಾತಿವಾರು	ವಿದ್ಯಾರ್ಥಿನಿಲಯಗಳ ಸಂಖ್ಯೆ
1	ಪರಿಶಿಷ್ಟ ಜಾತಿ	12
2	ಹಿಂದುಳಿದ ವರ್ಗ	10
	ಒಟ್ಟು	**22**

ವಿವರಗಳನ್ನು ಅನುಬಂಧ–1ರಲ್ಲಿ ನೀಡಲಾಗಿದೆ

ಆ) ಹೌದು